# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 489 |
| ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 08-12-2023. |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; | ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ:**883** |
| ಆ | ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳು ಎಷ್ಟು; | ಸ್ವಂತ ಕಟ್ಟಡದಲ್ಲಿ ಕಾರ್ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ: **759** |
| ಇ | ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳು ಎಷ್ಟು; | ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ:**54** |
| ಈ. | ಅಂಗನವಾಡಿ ಕೇಂದ್ರಗಳು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಕೊಡಗು ಜಿಲ್ಲೆಯಲ್ಲಿ ಒಟ್ಟು 83 ಅಂಗನವಾಡಿ ಕೇಂದ್ರಗಳು ದುಸ್ಥಿತಿಯಲ್ಲಿದ್ದು, ಈ ಕೇಂದ್ರಗಳಲ್ಲಿ 3 ಕೇಂದ್ರಗಳನ್ನು ಕೆಡವಿ ಹೊಸ ಅಂಗನವಾಡಿ ಕೇಂದ್ರಗಳನ್ನು ಮಹಾತ್ವಾಕಾಂಕ್ಷಿ ಯೋಜನೆಯಡಿ ಕಟ್ಟಡ ನಿರ್ಮಾಣ ಮಾಡಲು ಹಾಗೂ ಮೇಲ್ಛಾವಣಿ, ಗೋಡೆ, ಕಿಟಕಿ, ಬಾಗಿಲು, ಶೌಚಾಲಯ ಮತ್ತು ಶಿಥಿಲಾವಸ್ಥೆಯಲ್ಲಿರುವ 74 ಅಂಗನವಾಡಿ ಕೇಂದ್ರಗಳನ್ನು 2023-24ನೇ ಸಾಲಿನ ಜಿಲ್ಲಾವಲಯ ಲಿಂಕ್ ಡಾಕ್ಯೂಮೆಂಟ್ ಹಾಗೂ ಅನಿರ್ಬಂಧಿತ ಅನುದಾನದಡಿ ದುರಸ್ಥಿ ಪಡಿಸಲು ಕ್ರಮವಹಿಸಲಾಗಿದೆ.<br><br>ಉಳಿದ ಕೇಂದ್ರಗಳನ್ನು ಅನುದಾನ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ದುರಸ್ಥಿ ಪಡಿಸಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಉ. | ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೊಡಗು ಜಿಲ್ಲೆಯ ಗೋಣಿಕೊಪ್ಪ ನಗರ ಸಮೀಪದ ಹಾತೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಈರಣ್ಣ ಕಾಲೋನಿಯ ಅಂಗನವಾಡಿ ಕೆಂದ್ರದ ಮಕ್ಕಳು ಪೂರಕ ವಾತಾವರಣ ಇಲ್ಲದೆ ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು? (ವಿವರ ನೀಡುವುದು) | ಪೊನ್ನಂಪೇಟೆ ತಾಲ್ಲೂಕಿನ ಗೋಣಿಕೊಪ್ಪ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಈರಣ್ಣ ಕಾಲೋನಿಯ ಅಂಗನವಾಡಿ ಕೇಂದ್ರವು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು, ಇಲಾಖೆಯಿಂದ ಬಾಡಿಗೆ ಪಾವತಿಸಲಾಗುತ್ತಿದೆ. ಸದರಿ ಕೇಂದ್ರವು ಸಭಾಂಗಣ ಹಾಗೂ ಅಡುಗೆ ಮನೆ ಹೊಂದಿದ್ದು, ವಿದ್ಯುತ್ ಸಂಪರ್ಕ ಹಾಗೂ ಶೌಚಾಲಯವಿದೆ. ಈ ಕೇಂದ್ರಕ್ಕೆ ಸ್ವಂತ ಕಟ್ಟಡ ನಿರ್ಮಿಸಲು ಯಾವುದೇ ಸರ್ಕಾರಿ ನಿವೇಶನ ಇಲ್ಲದಿರುವುದರಿಂದ ನಿವೇಶನ ಪಡೆಯಲು ತಹಶೀಲ್ದಾರ್ ರವರಿಗೆ ಉಪನಿರ್ದೇಶಕರಿಂದ ಪತ್ರ ಬರೆಯಲಾಗಿದೆ. |

**ಸಂಖ್ಯೆ: ಮಮಇ 219 ಐಸಿಡಿ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.